ಸಿ.ಸಿ. ನಂ.20364/2020
ಪಿಡಬ್ಲೂ-4

<u>ಸಾಕ್ಷಿಯನ್ನು ದಿನಾಂಕಃ 26-03-2026 ರಂದು ಕರೆಸಿ ಪ್ರಮಾಣ ಮಾಡಿಸಲಾಯಿತು.</u>
<u>ಮುಂದುವರಿದ ಮುಖ್ಯ ವಿಚಾರಣೆ ಹಿ.ಸ.ಸಾ.ಅ. ರವರಿಂದಃ</u>

ಸಾಕ್ಷಿಯು ಮು. ಮಾ 1 ರಿಂದ 5 ನ್ನು ನೋಡಿ ಗುರುತಿಸಿರುತ್ತಾರೆ. ಪಿ. ಎಫ್. 35/2020 ರಂತೆ ಅಮಾನತ್ತು ಪಡಿಸಿಕೊಳ್ಳಲಾದ ಮುದ್ದೆಮಾಲುಗಳೊಂದಿಗೆ ಮತ್ತು ಮೊಬೈಲ್, ದ್ವಿಚಕ್ರ ವಾಹನ ಈ ಪ್ರಕರಣದಲ್ಲಿ ಅಳವಡಿಸಿಕೊಳ್ಳಲಾಗಿದ್ದು ಸದರಿ ಮುದ್ದೆ ಮಾಲುಗಳನ್ನು ಸಿಸಿ ನಂ. 20352/2020 ರಲ್ಲಿ ಹಾಜರುಪಡಿಸಿ ಮುದ್ದೆ ಮಾಲುಗಳಾಗಿ ಗುರುತಿಸಲಾಗಿದೆ. .

<u>ಪಾಟೀ ಸವಾಲು ಆರೋಪಿತರ ಪರ ವಕೀಲರಿಂದಃ</u>

ನಮ್ಮ ಪಿಐ ರವರು ನಮಗೆ ಬರವಣಿಗೆಯಲ್ಲಿ ಆದೇಶ ಮಾಡಿಲ್ಲ, ಮೌಖಿಕವಾಗಿ ಹೇಳಿದ್ದಾರೆ. ನಾವು ದಾಳಿಗೆ ಹೋಗುವ ವಿಚಾರವನ್ನು ಠಾಣಾ ಡೈರಿಯಲ್ಲಿ ನಮೂದು ಮಾಡಿದ್ದೇವೆ, ಆದರೆ ಆ ಡೈರಿಯನ್ನು ಹಾಜರುಪಡಿಸಿಲ್ಲ. ಚಾಸಾ 2 ಮತ್ತು 3 ರವರನ್ನು ಕರೆಯಿಸಿಲ್ಲ ಮತ್ತು ಅವರಿಗೆ ದಾಳಿಯ ಬಗ್ಗೆ ಮಾಹಿತಿಯನ್ನು ಕೊಟ್ಟಿಲ್ಲ ಎಂದರೆ ಸರಿಯಲ್ಲ. ಘಟನಾ ಸ್ಥಳಕ್ಕೆ ನಾವು ಹೋಗಿಲ್ಲ ಮತ್ತು ಆರೋಪಿಗಳನ್ನು ವಶಕ್ಕೆ ಪಡೆದಿಲ್ಲ ಎಂದರೆ ಸರಿಯಲ್ಲ.

ಆರೋಪಿಗಳು ತಮ್ಮ ಹೆಸರುಗಳನ್ನು ಹೇಳಿಲ್ಲಾ ಎಂದರೆ ಸರಿಯಲ್ಲ. ಆರೋಪಿಗಳ ವಶದಲ್ಲಿದ್ದ ಯಾವುದೇ ಮುದ್ದೆ ಮಾಲುಗಳನ್ನು ಅಮಾನತ್ತು ಪಡಿಸಿಕೊಂಡಿಲ್ಲ ಎಂದರೆ ಸರಿಯಲ್ಲ. ಆರೋಪಿಗಳು ಯಾವುದೇ ವಾಹನವನ್ನು ಕೃತ್ಯಕ್ಕೆ ಉಪಯೋಗಿಸಿರುವುದಿಲ್ಲ ಎಂದರೆ ಸರಿಯಲ್ಲ. ಆ ವಿಚಾರದಲ್ಲಿ ಯಾವುದೇ ಪಂಚನಾಮೆಯನ್ನು ಬರದಿಲ್ಲ ಎಂದರೆ ಸರಿಯಲ್ಲ. ಈ ಕೇಸಿನಲ್ಲಿ ಇರುವ ಮುದ್ದೆ ಮಾಲುಗಳು ಎಲ್ಲಾ ಕಡೆ ಸಿಗುತ್ತವೆ ನಾವು ಸೃಷ್ಟಿ ಮಾಡಿ ಕೊಟ್ಟಿದ್ದೇವೆ ಎಂದರೆ ಸರಿಯಲ್ಲ. ಮೇಲಾಧಿಕಾರಿಗಳ ಮಾತನ್ನು ಕೇಳಿಕೊಂಡು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಪಂಚನಾಮೆಯನ್ನು ಠಾಣೆಯಲ್ಲೇ ಸೃಷ್ಟಿ ಮಾಡಿದ್ದೇವೆ ಎಂದರೆ ಸರಿಯಲ್ಲ.

<u>ಮರುವಿಚಾರಣೆಃ ಇಲ್ಲ</u>

(ಸಾಕ್ಷಿಯ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು. ಸಾಕ್ಷಿಯ ಎದುರಿನಲ್ಲಿ ಓದಿ ಹೇಳಿದ ಮೇಲೆ ಸರಿ ಇದೆ ಎಂದು ಒಪ್ಪಿ ಸಹಿ ಮಾಡಲಾಯಿತು.)

ಓ ಹೇ ಕೇ ಸ ಇ ಒ

1 ನೇ ಅ. ಮು. ನ್ಯಾ.ದಂ. ನ್ಯಾ